## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮೈಸೂರು ಜಿಲ್ಲೆ, ನಂಜನಗೂಡು ತಾಲ್ಲೂಕಿನ ಹುಲ್ಲಹಳ್ಳಿ ಮತ್ತು ಇತರೆ 123 ಗ್ರಾಮಗಳಿಗೆ ಶಾಶ್ವತ ಹಾಗೂ ಸುರಕ್ಷಿತ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯನ್ನು DBOT ಆಧಾರದ ಮೇಲೆ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**

1. ದಿನಾಂಕ:10.02.2014ರಂದು ರಾಜ್ಯ ಮಟ್ಟದ ಅಧಿಕಾರಯುಕ್ತ ಸಮಿತಿ (SLEC)ಸಭೆಯ ನಡವಳಿಗಳು
2. ಸರ್ಕಾರದ ಆದೇಶ ಸಂ:ಗ್ರಾಅಪ 36 ಗ್ರಾನೀಸ(5)14 ದಿ:26.02.2015.
3. ದಿ:20.01.2015ರಂದು ನಡೆದ ಟೆಂಡರ್ ಅಂಗೀಕರಿಸುವ ಪ್ರಾಧಿಕಾರ ಸಭೆಯ ನಡವಳಿಗಳು.

--

**ಪೀಠಿಕೆ:**

ಮೈಸೂರು ಜಿಲ್ಲೆ, ನಂಜನಗೂಡು ತಾಲ್ಲೂಕಿನ ಹುಲ್ಲಹಳ್ಳಿ ಮತ್ತು ಇತರೆ **123** ಗ್ರಾಮಗಳ ಪೈಕಿ **95** ಜನವಸತಿಗಳಲ್ಲಿ ತಲಾ ದಿನಂಪ್ರತಿ 50 ಲೀಟರ್‌ಗಿಂತ ಕಡಿಮೆ ಕುಡಿಯುವ ನೀರು ಪೂರೈಕೆಯಾಗುತ್ತಿದೆ ಹಾಗೂ 3 ಜನವಸತಿಗಳಲ್ಲಿ ನೀರಿನ ಗುಣಮಟ್ಟದ ಸಮಸ್ಯೆಯಿದೆ. ಹುಲ್ಲಹಳ್ಳಿ ಮತ್ತು ಇತರೆ **123** ಗ್ರಾಮಗಳಿಗೆ ಕಬಿನಿ ನದಿ ಜಲಮೂಲದಿಂದ ಶಾಶ್ವತ ಹಾಗೂ ಸುರಕ್ಷಿತ ಕುಡಿಯುವ ನೀರೊದಗಿಸಲು ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗೆ **ದಿನಾಂಕ:24.12.2014ರ** ರಾಜ್ಯ ಮಟ್ಟದ ಯೋಜನಾ ಮಂಜೂರಾತಿ ಸಮಿತಿ (SLSSC) ಸಭೆಯಲ್ಲಿ ತಾತ್ವಿಕ ಒಪ್ಪಿಗೆ ನೀಡಿದ್ದು, **ದಿನಾಂಕ:10.02.2014ರ** ರಾಜ್ಯ ಮಟ್ಟದ ಅಧಿಕಾರಯುಕ್ತ ಸಮಿತಿ (SLEC)ಯು **ರೂ.91.913ಕೋಟಿ** ಅಂದಾಜು ಮೊತ್ತಕ್ಕೆ ಅನುಮೋದನೆಯನ್ನು ಸಹ ನೀಡಿರುತ್ತದೆ.

2. KTPP ಕಾಯ್ದೆಯನ್ವಯ **ದಿನಾಂಕ:01.08.2014ರಲ್ಲಿ** ಇ-ಪ್ರೊಕ್ಯೂರ್‌ಮೆಂಟ್ ಮೂಲಕ DBOT ಟೆಂಡರ್ ಆಹ್ವಾನಿಸಿದ್ದು, ಈ ಟೆಂಡರ್ ಪ್ರಕಟಣೆಗೆ ಇಬ್ಬರು ಗುತ್ತಿಗೆದಾರರಾದ ಮೆ॥ ಮೇಘ ಇಂಜಿನಿಯರಿಂಗ್ ಇನ್ಫ್ರಾಸ್ಟ್ರಕ್ಚರ್ ಲಿ., ಹೈದರಾಬಾದ್ (MEIL) ಮತ್ತು ಮೆ॥ದಿ ಇಂಡಿಯನ್ ಹ್ಯೂಮ್ ಪೈಪ್ ಕೋ ಲಿ., ಮುಂಬೈರವರು ಭಾಗವಹಿಸಿರುತ್ತಾರೆ. ಮೆ॥ದಿ ಇಂಡಿಯನ್ ಹ್ಯೂಮ್ ಪೈಪ್ ಕೋ ಲಿ., ಮುಂಬೈರವರು ಟೆಂಡರ್ ಷರತ್ತಿನನ್ವಯ ಇ-ಪ್ರೊಕ್ಯರ್‌ಮೆಂಟ್‌ನಲ್ಲಿ EMD ಇಂಧೀಕರಿಸಿದ ಕಾರಣ ತಾಂತ್ರಿಕ ಬಿಡ್ಡನ್ನು ತೆರೆಯಲಾಗಿರುವುದಿಲ್ಲ. ಆದ್ದರಿಂದ ಮೆ॥ ಮೇಘ ಇಂಜಿನಿಯರಿಂಗ್ ಇನ್ಫ್ರಾಸ್ಟ್ರಕ್ಚರ್ ಲಿ., ಹೈದರಾಬಾದ್‌ರವರು ಏಕೈಕ ಬಿಡ್ಡುದಾರರಾಗಿದ್ದು, ತಾಂತ್ರಿಕ ಬಿಡ್ಡನ್ನು DBOT ತಾಂತ್ರಿಕ ಸಮಿತಿ ಅನುಮೋದಿಸಿರುತ್ತದೆ. M/s MEIL ಹೈದರಾಬಾದ್‌ರವರು ನಮೂದಿಸಿದ ದರ **ರೂ.137.006ಕೋಟಿ** ಆಗಿರುತ್ತದೆ.

3. ಬಿಡ್ ದರ ನಮೂದಿಸಿರುವ ಗುತ್ತಿಗೆದಾರರು ಟೆಂಡರ್ ಮೊತ್ತದಲ್ಲಿ ಕಡಿತಗೊಳಿಸಲು ಸಾಧ್ಯವಿಲ್ಲವೆಂದು ತಿಳಿಸಿದ್ದು ಈ ಬಗ್ಗೆ CE/RDWSDರವರ ಪ್ರಸ್ತಾವನೆಯನ್ನು ಟೆಂಡರ್ ಅಂಗೀಕರಿಸುವ ಪ್ರಾಧಿಕಾರವು ಪರಿಶೀಲಿಸಿತು. ಚಾಲ್ತಿ CSR ದರಗಳಿಗೆ ಹೋಲಿಸಿದಾಗ ಟೆಂಡರ್ ಪ್ರೀಮಿಯಂ **ಶೇ.39.90ರಷ್ಟಿದೆ.** ಗುತ್ತಿಗೆದಾರರು ಯೋಜನಾ ಕಾಮಗಾರಿಗಳನ್ನು CSR ಮೊತ್ತ **ರೂ.101.563ಕೋಟಿಗಳ** ಮೇಲೆ **ಶೇ.10ರಷ್ಟು** ಅಂದರೆ **ರೂ.111.71ಕೋಟಿಗೆ** ಟೆಂಡರ್ ಪ್ರೀಮಿಯಂ ಒಪ್ಪಿದಲ್ಲಿ ಸದರಿ ಗುತ್ತಿಗೆದಾರರಿಗೆ ಕಾಮಗಾರಿ ಅನುಷ್ಠಾನಗೊಳಿಸಲು ಆದೇಶ ನೀಡುವಂತೆ ಇಲ್ಲವಾದಲ್ಲಿ ಮರು ಟೆಂಡರ್ ಕರೆಯುವಂತೆ ಟೆಂಡರ್ ಅಂಗೀಕರಿಸುವ ಪ್ರಾಧಿಕಾರ CE/RDWSDರವರಿಗೆ ನಿರ್ದೇಶಿಸಿರುತ್ತದೆ.

4. ಗುಂಡ್ಲುಪೇಟೆ ಮತ್ತು ಇತರೆ **131** ಬಹುಗ್ರಾಮಗಳಿಗೆ ನೀರೊದಗಿಸುವ ಯೋಜನೆಯ ಮೂಲ ಸ್ಥಾವರದ ಸ್ಥಳವನ್ನು ಹಾಗೂ ಹುಲ್ಲಹಳ್ಳಿ ಯೋಜನೆಗೂ ಪರಿಗಣಿಸಿದ್ದು, ಮೂಲಸ್ಥಾವರದ ಗಾತ್ರವನ್ನು ಹೆಚ್ಚಿಸಿ ಎರಡು ಯೋಜನೆಗಳಿಗೆ ಪ್ರತ್ಯೇಕವಾಗಿ ಪಂಪಿಂಗ್ ಮೆಷಿನರಿ ಜೊತೆಗೆ Panel Board, Electrical Line, Metering Cubicle ನಿರ್ಮಿಸಬಹುದಾಗಿದೆ. ಆದ್ದರಿಂದ ಶೇ.100ರಷ್ಟು ಉಳಿತಾಯವಾಗುವುದಿಲ್ಲ ಹಾಗೂ ಉಳಿತಾಯವು ಅತ್ಯಲ್ಪವಾಗಿರುತ್ತದೆ. ಇದನ್ನು ಪರಿಗಣಿಸಿ ಬಿಡ್ಡುದಾರರು ಹುಲ್ಲಹಳ್ಳಿ DBOT ಯೋಜನೆಯನ್ನು ರೂ.125.10ಕೋಟಿಗಳಿಗೆ ನಿರ್ವಹಿಸಲು ಒಪ್ಪಿರುತ್ತಾರೆ.

5. ಈ ಹಂತದಲ್ಲಿ ಟೆಂಡರ್ ನಿಯಮ ಮತ್ತು ಷರತ್ತುಗಳನ್ನು ಬದಲಾಯಿಸುವುದನ್ನು ಮತ್ತು ಗುಂಡ್ಲುಪೇಟೆ ಯೋಜನೆಯ ಮೂಲಸ್ಥಾವರದ ಸ್ಥಳವನ್ನು ಉಪಯೋಗಿಸುವುದಕ್ಕೆ ಅನುಮತಿ ನೀಡಿದ್ದಲ್ಲಿ ಟೆಂಡರ್ ಷರತ್ತು ಮತ್ತು ನಿಯಮಾವಳಿಗಳನ್ನು ಮಾರ್ಗಪಲ್ಲಟ ಮಾಡಿದಂತಾಗುತ್ತದೆ. ಆದ್ದರಿಂದ ಟೆಂಡರ್ ನಿಯಮ ಮತ್ತು ಷರತ್ತುಗಳನ್ನು ಬದಲಾಯಿಸದಿರುವ ನಿಬಂಧನೆಗೊಳಪಟ್ಟು, ರೂ.125.10ಕೋಟಿ ಮೊತ್ತದ ಈ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಲು ತೀರ್ಮಾನಿಸಲಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 11 ಗ್ರಾನೀಸ(5) 2015 ಬೆಂಗಳೂರು, ದಿನಾಂಕ:04.07.2015.**

ಪೀಠಿಕೆಯಲ್ಲಿನ ವಾಸ್ತಂಶಗಳನ್ನು ಪರಿಶೀಲಿಸಿ, ಮೈಸೂರು ಜಿಲ್ಲೆ ನಂಜನಗೂಡು ತಾಲ್ಲೂಕಿನ ಹುಲ್ಲಹಳ್ಳಿ ಮತ್ತು ಇತರೆ 123 ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯನ್ನು DBOT ಆಧಾರದ ಮೇಲೆ 5 ವರ್ಷಗಳ O&M ಸೇರಿದಂತೆ **ರೂ.125.10ಕೋಟಿ(ಒಂದು ನೂರ ಇಪ್ಪತ್ತೈದು ಕೋಟಿ ಹತ್ತು ಲಕ್ಷ ರೂಪಾಯಿಗಳು ಮಾತ್ರ)** ಅಂದಾಜು ವೆಚ್ಚದಲ್ಲಿ ಮೆ॥ ಮೇಘ ಇಂಜಿನಿಯರಿಂಗ್ ಇನ್ಫ್ರಾಸ್ಟ್ರಕ್ಚರ್ ಲಿ., ಹೈದರಾಬಾದ್‌ರವರ ಮುಖೇನ ಅನುಷ್ಠಾನಗೊಳಿಸುವ ಯೋಜನೆಗೆ ಟೆಂಡರ್ ನಿಯಮ ಮತ್ತು ಷರತ್ತುಗಳನ್ನು ಬದಲಾಯಿಸದಿರುವ ನಿಬಂಧನೆಗೊಳಪಟ್ಟು, ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

**2. ಈ ಆದೇಶವು ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ.**

a) ಸದರಿ ಟೆಂಡರ್‌ನ್ನು KTPP ಪಾರದರ್ಶಕ ನಿಯಮಗಳನ್ನು ಅನುಸರಿಸಿ ಅದರಂತೆ ಕ್ರಮವಹಿಸಲು ಸೂಚಿಸಲಾಗಿದೆ.

b) ಈ ಯೋಜನೆಯ ಅನುಷ್ಠಾನ ಮತ್ತು ಅನುದಾನ ವಿನಿಯೋಗದಲ್ಲಿ ಅನುಮೋದಿತ ಟೆಂಡರ್ ಮೊತ್ತ ಮೀರಿ ಹೆಚ್ಚಳವಾಗದಂತೆ ಅನುಷ್ಠಾನಾಧಿಕಾರಿಗಳು ನಿಗವಹಿಸಿ ಪ್ರಚಲಿತ ನಿಯಮಗಳಾನುಸಾರ ಅಗತ್ಯವಿರುವ ನಿಬಂಧನೆಗಳನ್ನು ಅಳವಡಿಸಿಕೊಂಡು ಸೂಕ್ತ ರೀತಿಯಲ್ಲಿ ಒಡಂಬಡಿಕೆ – ಕರಾರುಗಳನ್ನು ಮಾಡಿಕೊಳ್ಳತಕ್ಕದ್ದು.

c) ಈ ಯೋಜನೆಯನ್ನು 12 ತಿಂಗಳೊಳಗಾಗಿ M/s MEIL ಹೈದರಾಬಾದ್ ಸಂಸ್ಥೆ ಉತ್ತಮ ಗುಣಮಟ್ಟದಲ್ಲಿ ಪೂರ್ಣಗೊಳಿಸಿ ಕಾರ್ಯಗತಗೊಳಿಸಬೇಕು. ತದನಂತರ **5** ವರ್ಷಗಳ ಕಾಲ ಸದರಿ ಯೋಜನೆಯ ಸಂಪೂರ್ಣ ನಿರ್ವಹಣೆ ಹಾಗೂ ಕಾರ್ಯಾಚರಣೆ ಜವಾಬ್ದಾರಿಯನ್ನು (ವಿದ್ಯುತ್ ಶುಲ್ಕ ಹೊರತುಪಡಿಸಿ) ಸದರಿ ಸಂಸ್ಥೆಯೇ ನಿರ್ವಹಿಸತಕ್ಕದ್ದು.

d) ಕರಾರು ಪತ್ರದನ್ವಯ ಜನವಸತಿಗಳಿಗೆ ಕನಿಷ್ಠ 22.041 MLDನ್ನು ಶುದ್ಧ ಕುಡಿಯುವ ನೀರು ಪೂರೈಸಲು ಕ್ರಮವಹಿಸಬೇಕು ಮತ್ತು 70 LPCD ನೀರನ್ನು ಒದಗಿಸುವುದು. ಯಾವುದೇ ಕಾರಣಕ್ಕೂ ಅನುಮೋದಿತ ಯೋಜನಾ ಅಂದಾಜು ವೆಚ್ಚದಲ್ಲಿ ಹೆಚ್ಚಳವಾದಲ್ಲಿ ಸದರಿ ಸಂಸ್ಥೆಯೇ ಅಂತಹ ಹೆಚ್ಚಳ ಭರಿಸತಕ್ಕದ್ದು.

e) ಸಂಸ್ಥೆಯು ಸಿದ್ಧಪಡಿಸುವ ಡಿ.ಪಿ.ಆರ್‌ಗೆ **CE-RDWSD** ಹಂತದಲ್ಲಿರುವ **DBOT** ತಾಂತ್ರಿಕ ಸಮಿತಿ, ತಾಂತ್ರಿಕ ಸಿಂಧುತ್ವವನ್ನು ಪರಿಶೀಲಿಸಿ ದೃಢೀಕರಿಸಬೇಕು. ಹೀಗೆ ದೃಢೀಕರಿಸುವಾಗ ವಾಸ್ತವಿಕವಾಗಿ ಅಗತ್ಯವಿರುವ ಪ್ರಮಾಣದ ಶುದ್ಧ ಕುಡಿಯುವ ನೀರಿನ ಪೂರೈಕೆ ವ್ಯವಸ್ಥೆಗೆ ಅಗತ್ಯವಿರುವ ಎಲ್ಲಾ ತಾಂತ್ರಿಕ ವಿನ್ಯಾಸಗಳು ಮತ್ತು ಕಾಮಗಾರಿಗಳು ಪೂರಕವಾಗಿರುವುದನ್ನು ದೃಢಪಡಿಸಿಕೊಳ್ಳಬೇಕು.

f) ಟೆಂಡರ್ ಬಿಡ್ ಡಾಕ್ಯೂಮೆಂಟನಲ್ಲಿ ಸೂಚಿಸಿರುವ ಕಾಲಮಿತಿಯೊಳಗೆ ಯೋಜನೆಯ ಘಟಕದಲ್ಲಿನ ಸಾಮಗ್ರಿಗಳ ಬೆಲೆ ಹೆಚ್ಚಳಕ್ಕೆ ಅವಕಾಶವಿರುವುದಿಲ್ಲ. ಬಲ್ಕ್‌ವಾಟರ್ ಮೀಟರ್‌ಗಳನ್ನು ಎಲ್ಲಾ ಜನವಸತಿಗಳ OHT ಬಳಿ ಅಳವಡಿಸತಕ್ಕದ್ದು.

g) ಯೋಜನಾ ಅಂದಾಜು ಮೊತ್ತದ ಕನಿಷ್ಠ **10%**ನ್ನು ಸಂಸ್ಥೆಯು ಯೋಜನೆ ಕಾರ್ಯಗತಗೊಳಿಸಿ ತೃಪ್ತಿಕರ **O&M** ವ್ಯವಸ್ಥೆ ನಿರೂಪಿಸುವ ಕಾರ್ಯಕ್ಷಮತೆ ಆಧರಿಸಿ ನಂತರ ಪಾವತಿಸಬೇಕು.

h) ಈ ಯೋಜನೆಯಡಿ ಲಗತ್ತಿಸಿರುವ ಅಂದಾಜು ಘೋಷ್ವಾರೆಯಂತೆ ಮುಖ್ಯ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿದ ನಂತರ, ಅವುಗಳ ಗುಣಮಟ್ಟ ಮತ್ತು ಕಾರ್ಯಕ್ಷಮತೆ ಮತ್ತು **PMC** ವರದಿ ಆಧರಿಸಿ ಅನುಮೋದಿತ **ToR** ಹಾಗೂ ಟೆಂಡರ್ ಕರಾರಿನಂತೆ ನಿಯಮಾನುಸಾರ ಬಿಲ್ ಪಾವತಿಸಲು ಅನುಷ್ಠಾನಾಧಿಕಾರಿಗಳು ಹಾಗೂ **CE-RDWSD** ಕ್ರಮವಹಿಸಬೇಕು. ಕಾಮಗಾರಿಯ ಕಾಲಕಾಲಿಕ ಪ್ರಗತಿ ಮತ್ತು ಗುಣಮಟ್ಟ ಪರಿಶೀಲಿಸಿ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗೆ ವರದಿ ಮಾಡತಕ್ಕದ್ದು.

i) ಈ ಯೋಜನೆಯ ವಿನ್ಯಾಸದ ಕಾರ್ಯಸಿಂಧುತ್ವ ಪರಿಶೀಲಿಸುವುದು, ಕಾಲಮಿತಿಯೊಳಗೆ ಯೋಜನೆ ಅನುಷ್ಠಾನಗೊಳಿಸುವುದು ಮತ್ತು ಯೋಜನೆಯ ಕಾಮಗಾರಿಗಳ ಗುಣಮಟ್ಟ ಪರಿವೀಕ್ಷಣೆ ಸಲುವಾಗಿ ಅಗತ್ಯವಿರುವ ಯೋಜನಾ ಉಸ್ತುವಾರಿ ಘಟಕವನ್ನು ಟೆಂಡರ್ ಮುಖೇನ ಗೊತ್ತುಪಡಿಸಿ, ಸರ್ಕಾರದ ಅನುಮೋದನೆ ಪಡೆಯಲು ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಜರೂರಾಗಿ ಕ್ರಮವಹಿಸತಕ್ಕದ್ದು.

j) ಮೇಲ್ಕಂಡ ಅನುಮೋದಿತ ಮೊತ್ತ **DBOT** ತಾಂತ್ರಿಕ ಸಮಿತಿ ದೃಢೀಕರಿಸುವ ಯೋಜನೆಯ ಮುಖ್ಯ ಕಾಮಗಾರಿಗಳ ವಾಸ್ತವಿಕ ಅಂದಾಜು ಮೊತ್ತದ ನಿಬಂಧನೆಗೊಳಪಟ್ಟಿರುತ್ತದೆ. ಅಂತೆಯೇ,ಅನುಮೋದಿತ ಸಂಸ್ಥೆಯೊಡನೆ **MoU**/ಕರಾರು ಪತ್ರ ಮಾಡಿಕೊಳ್ಳುವ ಮೊದಲು ಗರಿಷ್ಠ ಮಿತವ್ಯಯ ಅಳವಡಿಸಿ, ಸರ್ಕಾರದ ಅನುಮತಿ ಪಡೆದು ಯೋಜನೆಯ ಅನುಷ್ಠಾನ ಕುರಿತು **CE/RDWSD** ಮುಂದಿನ ಕ್ರಮವಹಿಸತಕ್ಕದ್ದು.

3. ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ:FD 73 EXP-6 2015, ದಿನಾಂಕ:13.05.2015ರ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ. ಕೃಷ್ಣಪ್ಪ)
ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು-1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಆರ್ಥಿಕ ಇಲಾಖೆರವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
8. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-1.
9. ವಿಶೇಷಾಧಿಕಾರಿಗಳು (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ ಬೆಂಗಳೂರು-1.
10. ಸರ್ಕಾರದ ಆಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, 'E' Block, K.H.B Complex, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560009.
12. ವ್ಯವಸ್ಥಾಪಕ ನಿರ್ದೇಶಕರು KUIDFC Unity Building ಆವರಣ ಬೆಂಗಳೂರು.

13. ವ್ಯವಸ್ಥಾಪಕ ನಿರ್ದೇಶಕರು KUWS&DB ಜಲ ಭವನ ಬನ್ನೇರಘಟ್ಟ ರಸ್ತೆ, ಬೆಂಗಳೂರು.
14. ಅಧ್ಯಕ್ಷರು, ಜಿಲ್ಲಾ ಪಂಚಾಯತ್ ಮೈಸೂರು,
15. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ / ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಮೈಸೂರು,
16. ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ವೃತ್ತ ಕಛೇರಿ, ಮೈಸೂರು.
17. ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಮೈಸೂರು,
18. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್(TNMC), ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
19. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿಗಳು.
20. ಆಯುಕ್ತರು ಹಾಗೂ ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ, **RDWSD** / ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರುಗಳ ಆಪ್ತ ಸಹಾಯಕರು
21. ಮುಖ್ಯ ಲೆಕ್ಕಾಧಿಕಾರಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.
22. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, **BWSSB Branch**, ರಾಜಧೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು-9.
23. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್‌ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
24. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
25. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
26. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
27. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಮಾಹಿತಿ ಕೇಂದ್ರ (10 ಪ್ರತಿಗಳು).
28. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.